# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಂಡ್ಯ ಜಿಲ್ಲೆ ಮಳವಳ್ಳಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಅಂತಿಮ) ಯನ್ನು ಸರ್ಕಾರದ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂ. ನಅಇ 78 ಎಂಐಬಿ 2000, ದಿ: 20.2.01.

2) ನಗರ ಯೋಜನಾ ಸಹಾಯಕ ನಿರ್ದೇಶಕರು, ಮಂಡ್ಯ ಇವರ ಪತ್ರ ಸಂಖ್ಯೆ. ನಯೋಸಮಂ:ಮಯೋ:ವಳವಳ್ಳಿ:2005-06, ದಿ: 13.2.06.

3) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು ಇವರ ಏಕ ಕಡತ ಸಂಖ್ಯೆ. ನಯೋ(26)ಮ.ಮಾಯೋ:2006(06).

* * * * *

**ಪ್ರಸ್ತಾವನೆ:**

ಮಂಡ್ಯ ಜಿಲ್ಲೆಯ ಮಳವಳ್ಳಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಾಸ್ಟರ್ ಪ್ಲಾನ್ (ಸ್ಥೂಲಾಭಿವೃದ್ಧಿ ಯೋಜನೆ) ಗೆ ಮೇಲೆ ಓದಲಾದ (1) ರ ಆದೇಶದಲ್ಲಿ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2) ರ ಪ್ರಸ್ತಾವನೆಯಲ್ಲಿ ಮಳವಳ್ಳಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾ ಯೋಜನೆ (ಅಂತಿಮ) ಯನ್ನು ಅನುಮೋದನೆಗಾಗಿ ತಯಾರಿಸಿ ಸಲ್ಲಿಸಿರುತ್ತಾರೆ.

ಮಳವಳ್ಳಿ ಪಟ್ಟಣದ ಜನಸಂಖ್ಯೆಯು 2001 ರ ಜನಗಣತಿಯಂತೆ 35,851 ಇದ್ದು 20 ವರ್ಷಗಳ ಯೋಜನಾ ಅವಧಿಗೆ ಅಂದರೆ 2021 ನೇ ಇಸವಿಗೆ 59,000 ಆಗಬಹುದೆಂದು ಅಂದಾಜಿಸಿ ಮಹಾ ಯೋಜನೆ (ಅಂತಿಮ) ತಯಾರಿಸಲಾಗಿದೆ. ಮಳವಳ್ಳಿ ಪಟ್ಟಣದ ಜನಸಂಖ್ಯೆ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹವಾಗುಣ, ರಸ್ತೆಗಳ ಹಾಲಿ ಪರಿಚಲನೆ ವ್ಯವಸ್ಥೆಯ ಸಮಸ್ಯೆಯನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿಗನುಗುಣವಾಗಿ ಹಾಗೂ ಮಹಾ ಯೋಜನೆ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 12 ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಬೆಳವಣಿಗೆಗೆ (2021) ವಿವಿಧ ಉಪಯೋಗಗಳಿಗಾಗಿ ಬೇಕಾಗಬಹುದಾದ ಜಮೀನುಗಳನ್ನು ಅಂದರೆ ವಸತಿಗಾಗಿ 341.19 ಹೆಕ್ಟೇರ್ (ಶೇ.51.31), ವಾಣಿಜ್ಯ ಉಪಯೋಗಕ್ಕಾಗಿ 34.79 ಹೆಕ್ಟೇರ್ (ಶೇ.5.23), ಕೈಗಾರಿಕಾ ಉಪಯೋಗಕ್ಕಾಗಿ 20.37 ಹೆಕ್ಟೇರ್ (ಶೇ.3.06), ಸಾರ್ವಜನಿಕ/ ಅರೆ ಸಾರ್ವಜನಿಕ ಉಪಯೋಗಕ್ಕಾಗಿ 49.85 ಹೆಕ್ಟೇರ್ (ಶೇ.7.5), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 63.92 ಹೆಕ್ಟೇರ್ (ಶೇ.9.61) ಹಾಗೂ ಸಾರಿಗೆ ಮತ್ತು ಸಂಪರ್ಕಕ್ಕಾಗಿ 150.86 ಹೆಕ್ಟೇರ್ (ಶೇ.22.69) ಜಮೀನನ್ನು ಕಾಯ್ದಿರಿಸಿ ಮಹಾ ಯೋಜನೆ (ಅಂತಿಮ) ಯನ್ನು ರೂಪಿಸಲಾಗಿದೆ. ಈ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದೆ. ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(3) ರಡಿಯಲ್ಲಿ ಅಂತಿಮ ಅನುಮೋದನೆಯನ್ನು ನೀಡಲು ಮೇಲೆ ಓದಲಾದ (3) ರ ಪ್ರಸ್ತಾವನೆಯಲ್ಲಿ ಶಿಫಾರಸ್ಸು ಮಾಡಲಾಗಿದೆ.

96

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ. ನಅಇ 223 ಮೈಅಪ್ರಾ 2006, ಬೆಂಗಳೂರು, ದಿನಾಂಕ: 9.6.2006.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮಳವಳ್ಳಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಅಂತಿಮ) ಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 2004 ರ ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಳವಳ್ಳಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಅಂತಿಮ) ಗೆ ಅನುಮೋದನೆ ನೀಡಿದ ಗುರುತಾಗಿ ನಕ್ಷೆ ಮತ್ತು ವರದಿಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ವೈ. ಸಾಗರ) 9/6/06
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೨) ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಮಂಡ್ಯ.
೩) ಮುಖ್ಯಾಧಿಕಾರಿ, ಪುರಸಭೆ, ಮಳವಳ್ಳಿ ನಗರ ಯೋಜನಾ ಪ್ರಾಧಿಕಾರ, ಮಳವಳ್ಳಿ.
೪) ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
೫) ವಾರದ ರಾಜ್ಯಪತ್ರ.